ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1274
ಸದಸ್ಯರ ಹೆಸರು	ಶ್ರೀ ಎನ್ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	24-12-2021
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಮುಖ್ಯಮಂತ್ರಿ "ರೈತ ಮಕ್ಕಳ ವಿದ್ಯಾನಿಧಿ" ಯೋಜನೆ ರಾಜ್ಯದಲ್ಲಿ ಅಸ್ತಿತ್ವದಲ್ಲಿದೆಯೇ; ಇದ್ದಲ್ಲಿ, ಇದರ ರೂಪುರೇಷಗಳೇನು;	'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನ ಕಾರ್ಯಕ್ರಮವನ್ನು, ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿದೆ. ಎಸ್.ಎಸ್.ಎಲ್.ಸಿ ಅಥವಾ 10 ನೇ ತರಗತಿಯ ನಂತರ, ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ವಿಶ್ವ ವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರುವ ಕರ್ನಾಟಕ ರಾಜ್ಯದ ರೈತರ ಎಲ್ಲಾ ಮಕ್ಕಳ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಪದ್ಧತಿಯ ಮೂಲಕ ಪ್ರಸಕ್ತ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ, ಶಿಷ್ಯ ವೇತನದ ಹಣದ ಮೊತ್ತವನ್ನು ವರ್ಗಾಯಿಸಲಾಗುವುದು.
ಆ)	ಈ ಯೋಜನೆಗೆ ಫಲಾನುಭವಿಗಳ ಆಯ್ಕೆಯ ಮಾನದಂಡಗಳೇನು.	ಈ ಯೋಜನೆಯ ಫಲಾನುಭವಿಗಳ ಆಯ್ಕೆಯ ಮಾನದಂಡಗಳು ಈ ಕೆಳಕಂಡಂತಿವೆ. ರೈತ ಕುಟುಂಬದ ಎಲ್ಲಾ ಮಕ್ಕಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು. ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿ ವೇತನ

		ಪಡೆಯುತ್ತಿದ್ದರೂ 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗುತ್ತಾರೆ. 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನವನ್ನು ವಿತರಿಸುವ ಉದ್ದೇಶಕ್ಕೆ ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರೆ ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ (On entitlement basis) ವಿದ್ಯಾರ್ಥಿ ವೇತನವನ್ನು ವಿತರಿಸುವುದು. ಅಲ್ಲದೆ ಉಳಿದ ವಿದ್ಯಾರ್ಥಿಗಳಿಂದ ಸಹ ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ, ಅಂತಹ ಪ್ರಕರಣಗಳನ್ನು ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿ ವೇತನವನ್ನು ನೇರ ನಗದು ವರ್ಗಾವಣೆ ಮೂಲಕ ವರ್ಗಾಯಿಸುವುದು.
ಇ)	ಈ ಯೋಜನೆಯಿಂದ ರಾಜ್ಯದಲ್ಲಿ ಎಷ್ಟು ರೈತ ಮಕ್ಕಳಿಗೆ ಅನುಕೂಲವಾಗಿದೆ ಹಾಗೂ ಈ ಯೋಜನೆಗೆ ಎಷ್ಟು ಹಣವನ್ನು ವಿನಿಯೋಗಿಸಲಾಗುವುದು?	ಈ ಯೋಜನೆಯಿಂದ ರಾಜ್ಯದಲ್ಲಿ ಇದುವರೆವಿಗೂ 1,18,138 ಮಕ್ಕಳಿಗೆ ಅನುಕೂಲವಾಗಿದೆ. ಈ ಯೋಜನೆಗೆ ವಾರ್ಷಿಕವಾಗಿ ರೂ.1000.00 ಕೋಟಿ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ.

ಸಂಖ್ಯೆ:AGRI-AML/262/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು